ಕರ್ನಾಟಕ ಸರ್ಕಾರ
(ಪೋಲೀಸ್ ಇಲಾಖೆ)

**ಪೋಲೀಸ್ ಆಯುಕ್ತರು ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಗಳು, ಬೆಂಗಳೂರು ನಗರ ರವರ ನಡವಳಿಗಳು**

ಉಪಸ್ಥಿತರು: ಭಾಸ್ಕರ್ ರಾವ್, ಐ.ಪಿ.ಎಸ್, ಪೋಲೀಸ್ ಆಯುಕ್ತರು, ಬೆಂಗಳೂರು ನಗರ.

ವಿಷಯ : ಬೆಂಗಳೂರು ನಗರ ಪೋಲೀಸ್ ಕಮೀಷನರೇಟ್ ವ್ಯಾಪ್ತಿಯಲ್ಲಿ ಕೊರೋನ ವೈರಸ್ (ಕೋವಿಡ್-19) ಹರಡದಂತೆ ಹೊರಡಿಸಲಾದ ತೆರವು-3 ರ ಮಾರ್ಗಸೂಚಿಗಳು ಮುಂದುವರೆದಂತೆ ದಿನಾಂಕ: 01.08.2020 ರಿಂದ ದಿನಾಂಕ: 31.08.2020 ರವರೆಗೆ ಸರ್ಕಾರ ಹೊರಡಿಸಿರುವ ಲಾಕ್‌ಡೌನ್ ಮಾರ್ಗಸೂಚಿಗಳನ್ನು ಅನುಷ್ಠಾನಗೊಳಿಸುವ ಸಂಬಂಧ ಪ್ರತಿಬಂಧಕಾಜ್ಞೆಯನ್ನು ಹೊರಡಿಸಿರುವ ಬಗ್ಗೆ.

ಉಲ್ಲೇಖ : ಮುಖ್ಯ ಕಾರ್ಯದರ್ಶಿ ಹಾಗೂ ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಕಾರ್ಯಕಾರಿ ಸಮಿತಿ ಅಧ್ಯಕ್ಷರು ಅವರ ಆದೇಶ ಸಂಖ್ಯೆ: ಕಂಇ 158 ಟಿಎನ್‌ಆರ್ 2020, ದಿನಾಂಕ: 30-07-2020

-----

ಪ್ರಸ್ತಾವನೆ:

ರಾಜ್ಯ ಸರ್ಕಾರವು ಆದೇಶ ಸಂಖ್ಯೆ: ಕಂಇ 158 ಟಿಎನ್‌ಆರ್ 2020, ದಿನಾಂಕ: 30-07-2020 ರಲ್ಲಿ ಕೋವಿಡ್-19 ಸೋಂಕು ಹರಡುವಿಕೆಯನ್ನು ನಿಯಂತ್ರಿಸುವ ಬಗ್ಗೆ ಕಂಟೈನ್‌ಮೆಂಟ್ ವಲಯಗಳನ್ನು ಹೊರತುಪಡಿಸಿದ ಪ್ರದೇಶಗಳಲ್ಲಿ ನಿಷೇಧಿತ ಕಾರ್ಯಚಟುವಟಿಕೆಗಳನ್ನು ಕ್ರಮೇಣವಾಗಿ ಪುನರ್ ಪ್ರಾರಂಭಿಸಲು ತೆರವು-3 ರ ಮಾರ್ಗಸೂಚಿಗಳನ್ನು ಹಾಗೂ ಕಂಟೈನ್‌ಮೆಂಟ್ ವಲಯಗಳ ಪ್ರದೇಶಗಳಲ್ಲಿ ಲಾಕ್‌ಡೌನ್ ಅನ್ನು ವಿಸ್ತರಿಸಿ ಆದೇಶಿಸಲಾಗಿರುತ್ತದೆ. ಅದರಂತೆ ಇವುಗಳು ದಿನಾಂಕ: 31.08.2020 ರವರೆಗೆ ಜಾರಿಯಲ್ಲಿರುತ್ತದೆ. ಸದರಿ ಮಾರ್ಗಸೂಚಿಗಳು ಈ ಕೆಳಕಂಡಂತೆ ಇರುತ್ತವೆ.

**ತೆರವು-3 (Unlock-3) ರ ಮಾರ್ಗಸೂಚಿಗಳು**
(ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 158 ಟಿಎನ್‌ಆರ್ 2020, ದಿನಾಂಕ: 30.07.2020 ರ ಅನ್ವಯ)

1. **ಕಂಟೈನ್‌ಮೆಂಟ್ ವಲಯಗಳನ್ನು ಹೊರತುಪಡಿಸಿದ ಪ್ರದೇಶಗಳಲ್ಲಿ ತೆರವು-3 ರ ಅವಧಿಯಲ್ಲಿ ಅನುಮತಿಸಲಾದ ಚಟುವಟಿಕೆಗಳು:**

ಕಂಟೈನ್‌ಮೆಂಟ್ ವಲಯಗಳ ಹೊರಗಿನ ಪ್ರದೇಶಗಳಲ್ಲಿ ಈ ಕೆಳಗಿನವುಗಳನ್ನು ಹೊರತುಪಡಿಸಿ, ಎಲ್ಲಾ ಚಟುವಟಿಕೆಗಳನ್ನು ಅನುಮತಿಸಲಾಗುವುದು.

ಎ) ಶಾಲೆಗಳು, ಕಾಲೇಜುಗಳು, ಶಿಕ್ಷಣ ಮತ್ತು ತರಬೇತಿ ಸಂಸ್ಥೆಗಳು 31ನೇ ಆಗಸ್ಟ್ 2020 ರವರೆಗೆ ಮುಚ್ಚಲ್ಪಡುತ್ತವೆ. ಆನ್‌ಲೈನ್/ದೂರಶಿಕ್ಷಣ ಕಲಿಕೆಗಳಿಗೆ ಅನುಮತಿಸುವುದನ್ನು ಮುಂದುವರೆಸಲಾಗುವುದು ಮತ್ತು ಪ್ರೋತ್ಸಾಹಿಸಲಾಗುವುದು.

ಬಿ) ಸಿನಿಮಾ ಮಂದಿರಗಳು, ಈಜುಕೊಳಗಳು, ಮನೋರಂಜನಾ ಉದ್ಯಾನವನಗಳು, ಚಿತ್ರಮಂದಿರಗಳು, ಬಾರ್‌ಗಳು, ಸಭಾಂಗಣಗಳು, ಅಸೆಂಬ್ಲಿ ಹಾಲ್‌ಗಳು ಮತ್ತು ಅಂತಹುದೇ ಸ್ಥಳಗಳು.

ಯೋಗಕೇಂದ್ರಗಳನ್ನು ಮತ್ತು ಜಿಮ್ನಾಷಿಯಂಗಳನ್ನು ತೆರೆಯಲು ದಿನಾಂಕ: 05.08.2020 ರಿಂದ ಅನುಮತಿಸಲಾಗುವುದು. ಈ ಸಂಬಂಧ ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಾಲಯ ಮತ್ತು ಕರ್ನಾಟಕ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಪ್ರಮಾಣಿತ ಕಾರ್ಯವಿಧಾನ (SOP) ಯನ್ನು ಹೊರಡಿಸಲಾಗುವುದು.

ಸಿ) ಎಂ.ಹೆಚ್.ಎ. ಅನುಮತಿಸಿದ ಪ್ರಯಾಣಿಕರ ಅಂತರ-ರಾಷ್ಟ್ರೀಯ ವಿಮಾನ ಪ್ರಯಾಣ ಹೊರತುಪಡಿಸಿ

ಡಿ) ಮೆಟ್ರೋ ರೈಲು.

ಇ) ಸಾಮಾಜಿಕ/ರಾಜಕೀಯ/ಕ್ರೀಡೆ/ಮನೋರಂಜನೆ/ಶೈಕ್ಷಣಿಕ/ಸಾಂಸ್ಕೃತಿಕ/ಧಾರ್ಮಿಕ ಕಾರ್ಯಗಳು ಮತ್ತು ಇತರೆ ಬೃಹತ್ ಸಭೆಗಳು.

ಈ ಮೇಲಿನ ಕಾರ್ಯ ಚಟುವಟಿಕೆಗಳನ್ನು ಪುನಾರಾಂಭಿಸುವುದಕ್ಕೆ ದಿನಾಂಕವನ್ನು ಭಾರತ ಸರ್ಕಾರವು ಪ್ರತ್ಯೇಕವಾಗಿ ನಿರ್ಣಯಿಸಬಹುದು ಮತ್ತು ಭಾರತ ಸರ್ಕಾರದ ಸಂಬಂಧಪಟ್ಟ ಮಂತ್ರಾಲಯಗಳಿಂದ ಸಾಮಾಜಿಕ ಅಂತರ ಕಾಯ್ದುಕೊಳ್ಳಲು ಹಾಗೂ ಕೋವಿಡ್-19 ಹರಡುವಿಕೆಯನ್ನು ತಡೆಗಟ್ಟಲು ಅಗತ್ಯ ಪ್ರಮಾಣಿತ ಕಾರ್ಯ ವಿಧಾನ (SOP) ಯನ್ನು ಹೊರಡಿಸತಕ್ಕದ್ದು.

2. **ಸ್ವಾತಂತ್ರ್ಯ ದಿನಾಚರಣೆ:**

ಸ್ವಾತಂತ್ರ್ಯ ದಿನಾಚರಣೆಯನ್ನು ಬಿ.ಬಿ.ಎಂ.ಪಿ., ಜಿಲ್ಲೆಗಳು, ಉಪ ವಿಭಾಗಗಳು, ತಾಲ್ಲೂಕುಗಳು, ಮುನ್ಸಿಪಲ್ ಮತ್ತು ಪಂಚಾಯತ್ ವ್ಯಾಪ್ತಿಯಲ್ಲಿ ಹಾಗೂ ಮನೆಗಳಲ್ಲೂ ಆಚರಿಸಲು ಸಾಮಾಜಿಕ ಅಂತರ ಕಾಯ್ದುಕೊಳ್ಳುವ ಮುಖಾಂತರ ಮತ್ತು ಇತರೆ ಆರೋಗ್ಯ ಶಿಷ್ಟಾಚಾರಗಳನ್ನು ಪಾಲಿಸುವುದರೊಂದಿಗೆ (ಉದಾ: ಮುಖಗವಸನ್ನು ಧರಿಸುವಂತಹ) ಅನುಮತಿಸಲಾಗುವುದು. ಈ ಸಂಬಂಧ ಭಾರತ ಸರ್ಕಾರದ ಗೃಹ ಮಂತ್ರಾಲಯವು ಪತ್ರ ಸಂಖ್ಯೆ.2/5/2020-Public, ದಿನಾಂಕ: 20.07.2020 ರಲ್ಲಿ ಹೊರಡಿಸಿರುವ ಸೂಚನೆಗಳನ್ನು ಪಾಲಿಸತಕ್ಕದ್ದು. ಗೃಹ ಮಂತ್ರಾಲಯದ ಪತ್ರವನ್ನು ಅನುಬಂಧ-III ರಲ್ಲಿ ಇರಿಸಿದೆ.

3. **ಕೋವಿಡ್-19 ನಿರ್ವಹಣೆಗೆ ರಾಷ್ಟ್ರೀಯ ನಿರ್ದೇಶನಗಳು**

ಕೋವಿಡ್-19 ನಿರ್ವಹಣೆಯ ಸಂಬಂಧ ರಾಷ್ಟ್ರೀಯ ನಿರ್ದೇಶನಗಳನ್ನು ಅನುಬಂಧ-1 ರಲ್ಲಿ ನಿಧಿಷ್ಟಪಡಿಸಿದಂತೆ ರಾಜ್ಯಾದ್ಯಂತ ಮುಂಸುವರೆಸತಕ್ಕದ್ದು.

4. **ಕಂಟೈನ್‌ಮೆಂಟ್ ವಲಯಗಳಿಗೆ ಸೀಮಿತವಾದ ಲಾಕ್‌ಡೌನ್**

ಎ) ಕಂಟೈನ್‌ಮೆಂಟ್ ವಲಯಗಳಲ್ಲಿನ ಲಾಕ್‌ಡೌನ್ ದಿನಾಂಕ: 31.08.2020 ರವರೆಗೆ ಮುಂದುವರೆಯುತ್ತದೆ.

ಬಿ) ಸೋಂಕಿನ ಪ್ರಸರಣ ಸರಪಳಿಯನ್ನು ಪರಿಣಾಮಕಾರಿಯಾಗಿ ಮುರಿಯುವ ಉದ್ದೇಶದಿಂದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಾಲಯ ಹಾಗೂ ಕರ್ನಾಟಕ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗಳು ಹೊರಡಿಸುವ ಮಾರ್ಗಸೂಚಿಯನ್ನು ಪರಿಗಣನೆಗೆ ತೆಗೆದುಕೊಂಡ ನಂತರ ಆಯುಕ್ತರು, ಬಿ.ಬಿ.ಎಂ.ಪಿ./ಜಿಲ್ಲಾ ಪ್ರಾಧಿಕಾರಗಳು ಕಂಟೈನ್‌ಮೆಂಟ್ ವಲಯಗಳನ್ನು ಗುರುತಿಸುತ್ತವೆ. ಈ ಕಂಟೈನ್‌ಮೆಂಟ್ ವಲಯಗಳನ್ನು ಆಯುಕ್ತರು, ಬಿ.ಬಿ.ಎಂ.ಪಿ. ಮತ್ತು ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ಸಂಬಂಧಿಸಿದ ಇಲಾಖೆಗಳು ವೆಬ್‌ಸೈಟ್‌ನಲ್ಲಿ ಪ್ರಕಟಿಸಿ, ಸದರಿ ಮಾಹಿತಿಯನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಾಲಯ (MoHFW) ದೊಂದಿಗೆ ಹಂಚಿಕೊಳ್ಳುವುದು.

ಸಿ) ಕಂಟೈನ್‌ಮೆಂಟ್ ವಲಯಗಳಲ್ಲಿ ಅಗತ್ಯ ಚಟುವಟಿಕೆಗಳಿಗೆ ಮಾತ್ರ ಅವಕಾಶ ಕಲ್ಪಿಸತಕ್ಕದ್ದು. ವೈದ್ಯಕೀಯ ತುರ್ತು ಸ್ಥಿತಿಗಳನ್ನು ಹೊರತುಪಡಿಸಿ ಮತ್ತು ಅಗತ್ಯ ಸರಕು ಮತ್ತು ಸೇವೆಗಳ ಪೂರೈಕೆಯನ್ನು ಕಾಪಾಡಿಕೊಳ್ಳಲು ಈ ವಲಯಗಳಲ್ಲಿ ಅಥವಾ ಹೊರಗೆ ವ್ಯಕ್ತಿಗಳ ಚಲನೆಯಿಲ್ಲ ಎಂದು ಖಚಿತಪಡಿಸಿಕೊಳ್ಳಲು ಕಟ್ಟುನಿಟ್ಟಾದ ಪರಿಧಿಯ (Strict Perimeter) ನಿಯಂತ್ರಣ ಇರತಕ್ಕದ್ದು. ಕಂಟೈನ್‌ಮೆಂಟ್ ವಲಯಗಳಲ್ಲಿ ಅಗತ್ಯವಿರುವಂತೆ ತೀವ್ರವಾದ ಸಂಪರ್ಕ ಪತ್ತೆ ಹಚ್ಚುವಿಕೆ, ಮನೆ-ಮನೆಗೆ ಕಣ್ಗಾವಲು ಮತ್ತು ಇತರೆ ಕ್ಲಿನಿಕಲ್ ಮಧ್ಯಸ್ಥಿಕೆಗಳು ಇರತಕ್ಕದ್ದು. ಈ ಉದ್ದೇಶಕ್ಕಾಗಿ MoHFWನ ಮಾರ್ಗಸೂಚಿಗಳನ್ನು ಹಾಗೂ ರಾಜ್ಯ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮಾರ್ಗಸೂಚಿಗಳನ್ನು ಪರಿಣಾಮಕಾರಿಯಾಗಿ ಕಾರ್ಯಗತಗೊಳಿಸತಕ್ಕದ್ದು.

ಡಿ) ಕಂಟೈನ್‌ಮೆಂಟ್ ವಲಯಗಳಲ್ಲಿನ ಚಟುವಟಿಕೆಗಳನ್ನು ಬಿ.ಬಿ.ಎಂ.ಪಿ./ಜಿಲ್ಲಾ ಪ್ರಾಧಿಕಾರಗಳು ಕಟ್ಟುನಿಟ್ಟಾಗಿ ಮೇಲ್ವಿಚಾರಣೆ ಮಾಡತಕ್ಕದ್ದು, ಮತ್ತು ಈ ವಲಯಗಳಲ್ಲಿ ಕಂಟೈನ್‌ಮೆಂಟ್ ಕ್ರಮಗಳಿಗೆ ಸಂಬಂಧಿಸಿದ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಜಾರಿಗೆ ತರತಕ್ಕದ್ದು.

ಇ) ಹೊಸ ಪ್ರಕರಣಗಳು ಸಂಭವಿಸುವ ಸಾಧ್ಯತೆಯಿರುವ ಕಂಟೈನ್‌ಮೆಂಟ್ ವಲಯಗಳ ಹೊರಗಿನ ಬಫರ್ ವಲಯಗಳನ್ನು ಸಹ ಬಿ.ಬಿ.ಎಂ.ಪಿ./ಜಿಲ್ಲಾ ಪ್ರಾಧಿಕಾರಗಳು ಗುರುತಿಸಬಹುದು. ಬಿ.ಬಿ.ಎಂ.ಪಿ/ಜಿಲ್ಲಾ ಪ್ರಾಧಿಕಾರಗಳು ಬಫರ್ ವಲಯದೊಳಗೆ ಅಗತ್ಯವೆಂದು ಪರಿಗಣಿಸಲಾದ ನಿರ್ಬಂಧಗಳನ್ನು ವಿಧಿಸಬಹುದು.

5. **ಬಿ.ಬಿ.ಎಂ.ಪಿ/ಜಿಲ್ಲೆಗಳು ಪರಿಸ್ಥಿತಿಯ ನಿರ್ಧರಣೆಯ ಆಧಾರದ ಮೇಲೆ, ಕಂಟೈನ್‌ಮೆಂಟ್ ವಲಯಗಳ ಹೊರಗೆ ಕೆಲವು ಚಟುವಟಿಕೆಗಳನ್ನು ನಿಷೇಧಿಸಬಹುದು ಅಥವಾ ಅಗತ್ಯವೆಂದು ಪರಿಗಣಿಸುವಂತಹ ನಿರ್ಬಂಧಗಳನ್ನು ವಿಧಿಸಬಹುದು:**

ರಾಜ್ಯದೊಳಗೆ ಮತ್ತು ರಾಜ್ಯದ ಹೊರಗೆ ವ್ಯಕ್ತಿಗಳ ಹಾಗೂ ಸರಕುಗಳ ಚಲನೆಗೆ ಯಾವುದೇ ನಿರ್ಬಂಧವಿರತಕ್ಕದ್ದಲ್ಲ. ಇಂತಹ ಚಟುವಟಿಕೆಗಳಿಗೆ ಪ್ರತ್ಯೇಕ ಅನುಮತಿ/ ಅನುಮೋದನೆ/ ಇ-ಪರ್ಮಿಟ್ ಅಗತ್ಯವಿರುವುದಿಲ್ಲ. ಆದಾಗ್ಯೂ ಇತರೆ

ರಾಜ್ಯಗಳಿಂದ ಕರ್ನಾಟಕ ರಾಜ್ಯಕ್ಕೆ ಆಗಮಿಸುವ ವ್ಯಕ್ತಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ) ಯಿಂದ ಹೊರಡಿಸಿರುವ ಮಾರ್ಗಸೂಚಿಗಳು/(SOP) ಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

6. **S.O.P. ಗಳ ಅನುಸಾರ ವ್ಯಕ್ತಿಗಳ ಚಲನೆ**

ಪ್ರಯಾಣಿಕರ ರೈಲುಗಳು ಮತ್ತು "ಶ್ರಮಿಕ್" ವಿಶೇಷ ರೈಲುಗಳ ಸಂಚಾರ; ದೇಶೀಯ ಪ್ರಯಾಣಿಕರ ವಿಮಾನ ಪ್ರಯಾಣ; ದೇಶದ ಹೊರಗೆ ಸಿಲುಕಿರುವ ಭಾರತೀಯ ಪ್ರಜೆಗಳ ಚಲನೆ ಮತ್ತು ವಿದೇಶಕ್ಕೆ ಪ್ರಯಾಣಿಸಲು ನಿರ್ದಿಷ್ಟ ವ್ಯಕ್ತಿಗಳ ಚಲನೆ; ವಿದೇಶಿ ಪ್ರಜೆಗಳ ಸ್ಥಳಾಂತರಿಸುವಿಕೆ ಮತ್ತು ಭಾರತೀಯ ಕಡಲ ತೀರದ ಸೈನ್ ಇನ್ ಮತ್ತು ಸೈನ್ ಅಪ್ ಅನ್ನು ಹೊರಡಿಸಲಾದ SOP ಗಳ ಅನುಸಾರ ನಿಯಂತ್ರಿಸತಕ್ಕದ್ದು.

7. **ದುರ್ಬಲ ವ್ಯಕ್ತಿಗಳ ರಕ್ಷಣೆ:**

65 ವರ್ಷಕ್ಕಿಂತ ಮೇಲ್ಪಟ್ಟ ವ್ಯಕ್ತಿಗಳು, ಸಹ-ಅಸ್ವಸ್ಥತೆ ಹೊಂದಿರುವ ವ್ಯಕ್ತಿಗಳು, ಗರ್ಭಿಣಿಯರು ಮತ್ತು 10 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳು ಅಗತ್ಯ ಮತ್ತು ಆರೋಗ್ಯ ಉದ್ದೇಶಗಳನ್ನು ಹೊರತುಪಡಿಸಿ ಮನೆಯಲ್ಲಿಯೇ ಇರಲು ಸಲಹೆ ನೀಡಲಾಗಿದೆ.

**ಆದೇಶ ಸಂಖ್ಯೆ ಎಸ್.ಬಿ/ಗು.ವಾ/ನಿಷೇದಾಜ್ಞೆ/27/2020 ದಿನಾಂಕ : 31.07.2020**

ಈ ದಿಸೆಯಲ್ಲಿ ಭಾಸ್ಕರ್ ರಾವ್, ಐಪಿಎಸ್, ಪೊಲೀಸ್ ಆಯುಕ್ತರು, ಬೆಂಗಳೂರು ನಗರ ಆದ ನಾನು ದಂಡ ಪ್ರಕ್ರಿಯಾ ಸಂಹಿತೆಯ ಕಲಂ 144(1) ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಬೆಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯಲ್ಲಿ ಈ ಕೆಳಕಂಡಂತೆ ಪ್ರತಿಬಂಧಕಾಜ್ಞೆಯನ್ನು ಹೊರಡಿಸಿರುತ್ತೇನೆ.

ಈ ಆದೇಶವು ಘನ ರಾಜ್ಯ ಸರ್ಕಾರವು ಬೆಂಗಳೂರು ಪೊಲೀಸ್ ಕಮೀಷನರೇಟ್ ವ್ಯಾಪ್ತಿಗೆ ಸಂಬಂಧಿಸಿದಂತೆ ಹೊರಡಿಸಿರುವ ಲಾಕ್‌ಡೌನ್ ಆದೇಶದ ಒಂದು ಭಾಗವಾಗಿದ್ದು, ಸದರಿ ಆದೇಶದಲ್ಲಿನ ಮಾರ್ಗಸೂಚಿಗಳು ಹಾಗೂ ನಿರ್ಬಂಧಿತ ಕ್ರಮಗಳನ್ನು ಸಾರ್ವಜನಿಕರು ಕಟ್ಟುನಿಟ್ಟಾಗಿ ಅನುಸರಿಸಬೇಕಾಗಿರುತ್ತದೆ. ಯಾವುದೇ ವ್ಯಕ್ತಿ ಈ ಮೇಲಿನ ನಿಯಂತ್ರಣ ಕ್ರಮಗಳನ್ನು ಉಲ್ಲಂಘಿಸಿದಲ್ಲಿ ಅಂತಹವರ ವಿರುದ್ಧ ವಿಪತ್ತು ನಿರ್ವಹಣಾ ಕಾಯ್ದೆ 2005 ರ ಕಲಂ. 51 ರಿಂದ 60 ರ ಜೊತೆಗೆ ಭಾರತೀಯ ದಂಡ ಸಂಹಿತೆ ಕಲಂ. 188 ರೀತ್ಯಾ ಕಾನೂನು ಕ್ರಮ ಜರುಗಿಸಲಾಗುವುದು.

**ಈ ಪ್ರತಿಬಂಧಕಾಜ್ಞೆಯು ದಿನಾಂಕ: 01.08.2020 ರಿಂದ ದಿನಾಂಕ: 31.08.2020 ರವರೆಗೆ ಅನ್ವಯವಾಗುವಂತೆ ಜಾರಿಯಲ್ಲಿರುತ್ತದೆ.**

ಈ ಸಂಬಂಧ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಆಗಾಗ್ಗೆ ಹೊರಡಿಸುವ ಆದೇಶಗಳು ಹಾಗೂ ವಿನಾಯಿತಿಗಳು ಈ ಪ್ರತಿಬಂಧಕಾಜ್ಞೆಗೆ ಒಳಪಡುತ್ತವೆ.

ಈ ಆದೇಶದಿಂದ ಯಾವುದೇ ವ್ಯಕ್ತಿ ಬಾಧಿತನಾಗಿದ್ದರೆ, ಈ ಆದೇಶದ ಬದಲಾವಣೆ/ಮಾರ್ಪಾಡಿಗೆ ಈ ಕಛೇರಿಗೆ ದಂಡ ಪ್ರಕ್ರಿಯ ಸಂಹಿತೆ ಕಲಂ 144(5) ರಡಿ ಅಥವಾ ದಂಡ ಪ್ರಕ್ರಿಯ ಸಂಹಿತೆ ಕಲಂ 144(6) ರ ಅನ್ವಯ ಮಾನ್ಯ ಘನ ಕರ್ನಾಟಕ ಸರ್ಕಾರದೆದುರು ಅರ್ಜಿ ಸಲ್ಲಿಸಲು ಅವಕಾಶವಿರುತ್ತದೆ.

ಈ ಆದೇಶದ ನಡವಳಿಯನ್ನು ನನ್ನ ಸಹಿ ಮತ್ತು ನನ್ನ ಕಛೇರಿಯ ಮೊಹರಿನಲ್ಲಿ 2020 ರ ಜುಲೈ ಮಾಹೆಯ ದಿನಾಂಕ 31 ರಂದು ಹೊರಡಿಸಲಾಗಿದೆ.

ಈ ಆದೇಶವನ್ನು ಕರ್ನಾಟಕ ಘನ ಸರ್ಕಾರದ ಸನ್ನಿಧಿಗೆ ಸಲ್ಲಿಸಲಾಗಿದೆ.

Seal of the Commissioner of Police & District Magistrate, Bengaluru City

( ಭಾಸ್ಕರ್ ರಾವ್ )
ಭಾಸ್ಕರ್ ರಾವ್, ಭಾ.ಪೊ.ಸೇ.
ಪೊಲೀಸ್ ಆಯುಕ್ತರು ಹಾಗೂ
ಪೊಲೀಸ್ ಆಯುಕ್ತರು
ಅಪರ ಜಿಲ್ಲಾ ದಂಡಾಧಿಕಾರಿಗಳು
ಬೆಂಗಳೂರು ನಗರ.
ಬೆಂಗಳೂರು ನಗರ.

ಗೆ,

1. ಸಂಕಲನಕಾರರು (Compiler), ಕರ್ನಾಟಕ ರಾಜ್ಯ ಪ್ರಪತ್ರ, ಬೆಂಗಳೂರು ರವರು ಈ ಆದೇಶವನ್ನು ವಿಶೇಷ ಕರ್ನಾಟಕ ರಾಜ್ಯ ಪತ್ರದಲ್ಲಿ ಕೂಡಲೇ ಪ್ರಕಟಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲು ಕೋರಲಾಗಿದೆ.
2. ಸಂಬಂಧಪಟ್ಟವರಿಗೆ

<u>ಪ್ರತಿಯನ್ನು:</u>

1. ಬೆಂಗಳೂರು ನಗರ ಪೋಲೀಸ್ ಕಮೀಷನರೇಟ್ ವ್ಯಾಪ್ತಿಯ ಎಲ್ಲಾ ಹೆಚ್ಚುವರಿ ಪೋಲೀಸ್ ಆಯುಕ್ತರುಗಳು
2. ಬೆಂಗಳೂರು ನಗರ ಪೋಲೀಸ್ ಕಮೀಷನರೇಟ್ ವ್ಯಾಪ್ತಿಯ ಎಲ್ಲಾ ಜಂಟಿ ಪೋಲೀಸ್ ಆಯುಕ್ತರುಗಳು
3. ಬೆಂಗಳೂರು ನಗರ ಪೋಲೀಸ್ ಕಮೀಷನರೇಟ್ ವ್ಯಾಪ್ತಿಯ ಎಲ್ಲಾ ಉಪ ಪೋಲೀಸ್ ಆಯುಕ್ತರುಗಳು
4. ಸಹಾಯಕ ಪೊಲಿಸ್ ಆಯುಕ್ತರು, ನಗರ ನಿಯಂತ್ರಣ ಕೋಣೆ, ಬೆಂಗಳೂರು ನಗರ.

<u>ಪ್ರತಿಯನ್ನು ಅಭಿನಂದನೆಗಳೊಂದಿಗೆ:</u>

1. ಮಹಾ ನಿರ್ದೇಶಕರು ಮತ್ತು ಪೊಲೀಸ್ ಮಹಾ ನಿರೀಕ್ಷಕರು, ಕರ್ನಾಟಕ ರಾಜ್ಯ, ಬೆಂಗಳೂರು.
2. ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕರು, ರಾಜ್ಯ ಗುಪ್ತವಾರ್ತೆ, ಕರ್ನಾಟಕ ರಾಜ್ಯ, ಬೆಂಗಳೂರು.
3. ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು.
4. ಅಬಕಾರಿ ಆಯುಕ್ತರು, ಕರ್ನಾಟಕ ರಾಜ್ಯ, ಬೆಂಗಳೂರು.